ಕರ್ನಾಟಕ ಸರ್ಕಾರ
ವಾಣಿಜ್ಯ ತೆರಿಗೆ ಇಲಾಖೆ

**2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಅಡಿ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ನಡಾವಳಿಗಳು**

ವಿಷಯ: ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ 2003– 'ಸಕ್ಕರೆಯನ್ನು ಉತ್ಪಾದಿಸುವ ಯಂತ್ರೋಪಕರಣದ' ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣ ಕುರಿತು.

ಉಲ್ಲೇಖ: ಮೆ: ವಿಆರ್‌ಎಲ್ ಆಟೋಮೇಷನ್ ಇಂಜಿನಿಯರಿಂಗ್ ಮತ್ತು ಪ್ರಾಜೆಕ್ಟ್ಸ್ ಪ್ರೈ. ಲಿ. ಬೆಂಗಳೂರು, ಇವರ ದಿ.18–02–2014 ರ ಅರ್ಜಿ. (ಟಿನ್: 29830098738)

***

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿಯಲ್ಲಿ ನೋಂದಾಯಿತರಾದ ಮೆ: ವಿಆರ್‌ಎಲ್ ಆಟೋಮೇಷನ್ ಇಂಜಿನಿಯರಿಂಗ್ ಮತ್ತು ಪ್ರಾಜೆಕ್ಟ್ಸ್ ಪ್ರೈ. ಲಿ., ನಂ. ಎ–170, 4ನೇ ಅಡ್ಡ ರಸ್ತೆ, 1ನೇ ಹಂತ, ಪೀಣ್ಯ ಕೈಗಾರಿಕಾ ಪ್ರದೇಶ, ಬೆಂಗಳೂರು–560058 ಇವರು ಮೇಲ್ಕಂಡ ಅರ್ಜಿಯಲ್ಲಿ 'ಸಕ್ಕರೆಯನ್ನು ಉತ್ಪಾದಿಸುವ ಯಂತ್ರೋಪಕರಣದ' ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59(4)ರ ಮೇರೆಗೆ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ),ಬೆಂಗಳೂರು ಇವರು ತೆರಿಗೆಯ ನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಅಧಿನಿಯಮದಡಿಯಲ್ಲಿ ತೆರಿಗೆಗೆ ಒಳಪಡುವ ಸರಕುಗಳ ಸಂಬಂಧದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ.

ಅರ್ಜಿದಾರರು ಕೋರಿರುವ ಸ್ಪಷ್ಟೀಕರಣವು ಮೇಲೆ ನಮೂದಿಸಿದ ಉಪಬಂಧದ ವ್ಯಾಪ್ತಿಗೊಳಪಡುವುದರಿಂದ ತೆರಿಗೆ ದರದ ಬಗ್ಗೆ ಸ್ಪಷ್ಟಪಡಿಸುವುದು ಸದರಿ ಉಪಬಂಧದ ಉದ್ದೇಶ ಸಾಧನೆಗಾಗಿ ಅವಶ್ಯವೆಂದು ಮನವರಿಕೆಯಾಗಿದೆ.

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

**ಸ್ಪಷ್ಟೀಕರಣ ಆದೇಶ ಸಂಖ್ಯೆಸಿಎಲ್‌ಆರ್/ಸಿಆರ್. 174/13–14, ದಿ.08–05–2014**

ಸಿಇಟಿ ಕೋಡ್ 8438.30ನಲ್ಲಿ ಬೀಳುವ 'ಸಕ್ಕರೆಯನ್ನು ಉತ್ಪಾದಿಸುವ ಯಂತ್ರೋಪಕರಣ' (Machinery for sugar manufacture) ದಿನಾಂಕ: 05.08.2005ರ ಅಧಿಸೂಚನೆ ಸಂಖ್ಯೆ: ಎಫ್‌ಡಿ 316 ಸಿಎಸ್‌ಎಲ್ 2005 (1) ರಲ್ಲಿನ ಕೋಷ್ಟಕದ ಕ್ರಮ ಸಂಖ್ಯೆ 17 ರಂತೆ ದಿನಾಂಕ: 01.08.2012ರಿಂದ ಶೇಕಡಾ 5.5. ತೆರಿಗೆಗೊಳಪಡುತ್ತದೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ.

(ಅಜಯ್ ಸೇಠ್)
ವಾಣಿಜ್ಯ ತೆರಿಗೆಗಳ ಆಯುಕ್ತರು,
(ಕರ್ನಾಟಕ), ಬೆಂಗಳೂರು.

**ವಾಣಿಜ್ಯ ತೆರಿಗೆಗಳ ಆಯುಕ್ತರು**
**ಕರ್ನಾಟಕ, ಬೆಂಗಳೂರು**